**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹಣಮಂತ ರುದ್ರಪ್ಪ ನಿರಾಣಿ ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ.**

****

**ವಿಷಯ:** ಅಖಂಡ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆಯು ನಮ್ಮ ದೇಶದ 3ನೇ ತೋಟಗಾರಿಕೆ ವಿಜ್ಞಾನಗಳ ವಿಶ್ವ ವಿದ್ಯಾಲಯವಾಗಿ 2008 ರಲ್ಲಿ ಪ್ರಾರಂಭಗೊಂಡಿದ್ದು, ಸದರಿ ವಿಶ್ವವಿದ್ಯಾಲಯವು 24 ಜಿಲ್ಲೆಗಳ ವ್ಯಾಪ್ತಿಗೆ ಒಳಪಟ್ಟಿದ್ದು ರೈತರ ಅಭ್ಯುದಯಕ್ಕಾಗಿ ಕಳೆದ 15 ವರ್ಷಗಳಿಂದ ತೋಟಗಾರಿಕೆ ವಿಷಯಕ್ಕೆ ಸಂಬಂಧಿಸಿದಂತೆ 300ಕ್ಕೂ ಹೆಚ್ಚು ತೋಟಗಾರಿಕೆ ತಂತ್ರಜ್ಞಾನಗಳನ್ನು ಸಂಶೋಧಿಸಿ, 45 ನೂತನ ತಳಿಗಳನ್ನು ವಿವಿಧ ತೋಟಗಾರಿಕೆ ಬೆಳೆಗಳಲ್ಲಿ ಅವಿಷ್ಕಾರಗೊಳಿಸಿ ರೈತರಿಗೆ ಯಶಸ್ವಿಯಾಗಿ ಸಮರ್ಪಿಸಿರುವುದು ಶ್ಲಾಘನೀಯ ವಿಷಯವಾಗಿದೆ.

ಕರ್ನಾಟಕದಲ್ಲಿರುವ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟವನ್ನು ಸಮಗ್ರ ಕೃಷಿ ವಿಶ್ವವಿದ್ಯಾಲಯವಾಗಿ ಪರಿವರ್ತಿಸಲು ಮುಂದಾಗಿರುವುದು ಸಮಂಜಸವಲ್ಲವೆಂದು ಭಾವಿಸುತ್ತೇನೆ. ಪ್ರಸ್ತುತ ಮಂಡ್ಯದಲ್ಲಿ ನೂತನ ಕೃಷಿ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಕುರಿತು ಸಮಿತಿಯನ್ನು ರಚಿಸಿದ್ದು, ಈ ಸಮಿತಿಯು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆಯ ವ್ಯಾಪ್ತಿಗೆ ಒಳಪಡುವ ಸಂಶೋಧನಾ ಹಾಗೂ ವಿಸ್ತರಣಾ ಕ್ಷೇತ್ರಗಳನ್ನು ಹೊಸದಾಗಿ ಸ್ಥಾಪಿಸುತ್ತಿರುವ ಮಂಡ್ಯ ಕೃಷಿ ವಿಶ್ವವಿದ್ಯಾಲಯಕ್ಕೆ ಸೇರ್ಪಡೆಗೊಳಿಸಲು ಶಿಫಾರಸ್ಸು ಮಾಡಿರುವುದು ನೋವಿನ ಸಂಗತಿಯಾಗಿದೆ. ಇದನ್ನು ನಮ್ಮ ಭಾಗದ ಎಲ್ಲ ಜನಪ್ರತಿನಿಧಿಗಳ ವಿರೋಧ ಇರುವುದನ್ನು ಸಹ ಸರ್ಕಾರವು ಗಣನೆಗೆ ತೆಗೆದುಕೊಂಡು ಬೇರೆ ಕೃಷಿ ವಿಶ್ವವಿದ್ಯಾಲಯಕ್ಕೆ ಸದರಿ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟಿ ಇದನ್ನು ಸೇರ್ಪಡೆಗೊಳಿಸುವ ವಿಚಾರವನ್ನು ಕೈಬಿಡಬೇಕೆಂದು ಆಗ್ರಹಿಸುತ್ತೇನೆ.

ಸದರಿ ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ಬೇರೆ ಯಾವುದೇ ಕೃಷಿ ವಿಶ್ವವಿದ್ಯಾಲಯಗಳಿಗೆ ಸೇರ್ಪಡೆಗೊಳಿಸದೇ ಬಾಗಲಕೋಟೆಯಲ್ಲಿಯೇ ಮುಂದುವರಿಸುವಂತೆ ಹಾಗೂ ಸದರಿ ವಿಶ್ವವಿದ್ಯಾಲಯವು ವಿವಿಧ ರೀತಿಯ ಕೃಷಿ ಸಂಶೋಧನೆಗಳನ್ನು ಕೈಗೊಳ್ಳಲು ಸುಮಾರು 200 ರಿಂದ 250 ಎಕರೆ ಜಾಗವನ್ನು ಕಲ್ಪಿಸುವ ಮತ್ತು ಸದರಿ ವಿಶ್ವವಿದ್ಯಾಲಯಕ್ಕೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಸರ್ಕಾರವು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ತಮ್ಮ ಮೂಲಕ ಶೂನ್ಯ ವೇಳೆಯಲ್ಲಿ ತೋಟಗಾರಿಕಾ ಸಚಿವರನ್ನು ಒತ್ತಾಯಿಸುತ್ತೇನೆ.

**ಉತ್ತರ:** ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಅಧ್ಯಾದೇಶ, 2008 ರನ್ವಯ ದಿನಾಂಕ: 22.11.2008 ರಂದು ಬಾಗಲಕೋಟೆಯಲ್ಲಿ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗಿದೆ. ಈ ವಿಶ್ವವಿದ್ಯಾಲಯದ ವ್ಯಾಪ್ತಿಗೆ 24 ಜಿಲ್ಲೆಗಳು ಒಳಪಡುತ್ತವೆ. 2024-25 ನೇ ಸಾಲಿನ ಆಯವ್ಯಯ ಘೋಷಣೆಯನ್ವಯ ಮಂಡ್ಯ ಜಿಲ್ಲೆಯ ವಿ.ಸಿ. ಫಾರಂ ನಲ್ಲಿ ನೂತನ ಕೃಷಿ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಬಗ್ಗೆ ಕೃಷಿ ಇಲಾಖೆಯು ರಚಿಸಿರುವ ತಜ್ಞರ ಸಮಿತಿಯು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆ. ಸದರಿ ಸಮಿತಿಯು ಮಂಡ್ಯ ವಿ.ಸಿ. ಫಾರಂ ನಲ್ಲಿ ಸಮಗ್ರ ಕೃಷಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಶಿಫಾರಸ್ಸನ್ನು ಮಾಡಿರುತ್ತದೆ ಹಾಗೂ ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ತೋಟಗಾರಿಕೆ ಕಾಲೇಜು, ಮೈಸೂರು, HREC ಮೈಸೂರು, AICRP (ತಾಳೆಗಳು) ಅರಸೀಕೆರೆ, ತೋಟಗಾರಿಕೆ, ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರ(HRCE), ಅರಸೀಕೆರೆ, HREC, ಸೋಮನಹಳ್ಳಿ ಕಾವಲ್ (ಹಾಸನ) ಮತ್ತು AICRP (ಆಲೂಗಡ್ಡೆ) ಹಾಸನ ಇವುಗಳನ್ನು ಮಂಡ್ಯ ಸಮಗ್ರ ವಿಶ್ವವಿದ್ಯಾಲಯಕ್ಕೆ ಒಳಪಡಿಸುವಂತೆ ಶಿಫಾರಸ್ಸು ಮಾಡಲಾಗಿರುತ್ತದೆ.

ಈ ವಿಷಯದ ಕುರಿತು ದಿನಾಂಕ: 26.11.2024ರಂದು ಹಮ್ಮಿಕೊಳ್ಳಲಾದ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟದ ವ್ಯವಸ್ಥಾಪನಾ ಮಂಡಳಿಯ 74ನೇ (ತುರ್ತು) ಸಭೆಯಲ್ಲಿ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟದ ವ್ಯಾಪ್ತಿಯಲ್ಲಿ ಬರುವ ಯಾವುದೇ ಮಹಾವಿದ್ಯಾಲಯ/ಸಂಶೋಧನಾ ಕೇಂದ್ರಗಳನ್ನು ವರ್ಗಾಯಿಸಲು/ ಹಸ್ತಾಂತರಿಸಲು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟದ ಸಹಮತ ಇರುವುದಿಲ್ಲವೆಂಬ ಸ್ಪಷ್ಟ ಅಭಿಪ್ರಾಯವನ್ನು ತಿಳಸಲಾಗಿರುತ್ತದೆ.

ಪ್ರಸ್ತುತ ಮಹಾವಿದ್ಯಾಲಯದ ಕಟ್ಟಡ, ವಿದ್ಯಾರ್ಥಿನಿಯರ ವಸತಿ ನಿಲಯಗಳ ಕಟ್ಟಡ, ಪ್ರಾದೇಶಿಕ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ಕಟ್ಟಡ, Tissue Culture Laboratory ಯನ್ನು ಮತ್ತು ಆಟದ ಮೈದಾನ ಇತ್ಯಾದಿಗಳನ್ನು ಒದಗಿಸಲಾಗಿದೆ. ಪ್ರೇಕ್ಷಾಗೃಹ ಕಟ್ಟಡ, ಗ್ರಂಥಾಲಯ ಕಟ್ಟಡ, ವಸತಿ ಗೃಹಗಳು, ನೀರಿನ ವ್ಯವಸ್ಥೆ, ಉಪಹಾರ ಮಂದಿರ ಮತ್ತು ಹೊರಾಂಗಣ ಕ್ರೀಡಾಂಗಣ ಸೌಲಭ್ಯವನ್ನು ಒದಗಿಸಬೇಕಾಗಿದ್ದು, ಅನುದಾನದ ಲಭ್ಯತೆಗೆ ಅನುಗುಣವಾಗಿ ಸೌಲಭ್ಯವನ್ನು ಒದಗಿಸಲಾಗುವುದು.

ಹಂತ ಹಂತವಾಗಿ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಮೂಲ ಸೌಕರ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

**HORTI 595 HGM 2024(E)**

**(ಎಸ್. ಎಸ್. ಮಲ್ಲಿಕಾರ್ಜುನ್)**
**ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು**